## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಹಿರಿಯ ನಾಗರೀಕರಿಗೆ "ವಯೋಶ್ರೇಷ್ಠ ಸಮ್ಮಾನ್" ರಾಷ್ಟ್ರ ಪ್ರಶಸ್ತಿಗೆ ಶಿಫಾರಸ್ಸು ಮಾಡಲು ಸಮಿತಿಯನ್ನು ರಚಿಸುವ ಕುರಿತು.

ಓದಲಾಗಿದೆ: ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ: ವಿಹಿನಾಸಇ/ ಹಿನಾವಿ/ ಸಿ.1/ವ.ಶೇ.ಸ/2013-14/7221, ದಿನಾಂಕ: 21.3.2014.

ಪ್ರಸ್ತಾವನೆ:

ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಪ್ರಯುಕ್ತ ಪ್ರತಿ ವರ್ಷ ಅಕ್ಟೋಬರ್ 1 ರಂದು ರಾಷ್ಟ್ರಮಟ್ಟದಲ್ಲಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ, ನವದೆಹಲಿ ಇವರ ಮೂಲಕ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಿರಿಯ ನಾಗರಿಕರಿಗೆ ಘನತೆವೆತ್ತ ರಾಷ್ಟ್ರಪತಿಗಳಿಂದ "ವಯೋಶ್ರೇಷ್ಠ ಸಮ್ಮಾನ್" ಪ್ರಶಸ್ತಿ ನೀಡಲಾಗುತ್ತಿದೆ. ಸದರಿ ಪ್ರಶಸ್ತಿಗಾಗಿ ಅರ್ಹರಿಂದ ಜಿಲ್ಲಾ ಮಟ್ಟದಲ್ಲಿ ಅರ್ಜಿಗಳನ್ನು ಆಹ್ವಾನಿಸಿ, ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಸಮಿತಿ ರಚಿಸಲು ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಓದಲಾದ ದಿನಾಂಕ: 21.3.2014 ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 42 ಪಿಎಚ್‌ಪಿ 2014, ಬೆಂಗಳೂರು, ದಿನಾಂಕ: 14.10.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಿರಿಯ ನಾಗರಿಕರಿಗೆ ರಾಷ್ಟ್ರಪತಿಗಳಿಂದ ನೀಡಲಾಗುವ "ವಯೋಶ್ರೇಷ್ಠ ಸಮ್ಮಾನ್" ಪ್ರಶಸ್ತಿಗಾಗಿ ಅರ್ಹರಿಂದ ಜಿಲ್ಲಾ ಮಟ್ಟದಲ್ಲಿ ಅರ್ಜಿಗಳನ್ನು ಆಹ್ವಾನಿಸಿ, ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಕೆಳಕಂಡಂತೆ ಸಮಿತಿಯನ್ನು ರಚಿಸಲಾಗಿದೆ.

| ಕ್ರ.ಸಂ. | ಸದಸ್ಯರ ವಿವರ | ಹುದ್ದೆ |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | ಅಧ್ಯಕ್ಷರು |
| 2 | ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು | ಸದಸ್ಯರು |
| 3 | ಅಧ್ಯಕ್ಷರು, ಕರ್ನಾಟಕ ಹಿರಿಯ ನಾಗರಿಕರ ವೇದಿಕೆಗಳ ಒಕ್ಕೂಟ (ರಿ), ನಂ.14. ಪುಷ್ಪರಂಗ ಕಾರ್ನ್‌ವೆಲ್ ಕ್ರಾಸ್‌ರೋಡ್, ಲಾಂಗ್‌ಫೋರ್ಡ್ ಗಾರ್ಡನ್ಸ್, ಬೆಂಗಳೂರು-560 025. | ಸದಸ್ಯರು |
| 4 | ಡಾ॥ ಇಂದಿರಾ ಜಯಪ್ರಕಾಶ್, ನಂ.88/9, ವಾಗ್ದೇವಿ, 19ನೇ ಮುಖ್ಯರಸ್ತೆ, ಪದ್ಮನಾಭನಗರ, ಬೆಂಗಳೂರು-560070. | ಸದಸ್ಯರು |
| 5 | ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | ಸದಸ್ಯ ಕಾರ್ಯದರ್ಶಿ |

ಸಮಿತಿಯು ಕೆಳಕಂಡ ಕಾರ್ಯಗಳನ್ನು ನಿರ್ವಹಿಸಬೇಕಾಗಿರುತ್ತದೆ:-

1) ವರ್ಷದಲ್ಲಿ ಒಂದು ಅಥವಾ ಅಗತ್ಯವಿದ್ದಲ್ಲಿ ಎರಡು ಸಭೆಯನ್ನು ಕರೆಯಬಹುದು.
2) ಪ್ರತಿ ವರ್ಷ ಅಕ್ಟೋಬರ್ 01 ರಂದು ನಡೆಯುವ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಿರಿಯ ನಾಗರಿಕರು ಹಾಗೂ ಸಂಘ

. . .2

ಸಂಸ್ಥೆಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಕೇಂದ್ರ ಕಛೇರಿಗೆ ಸಲ್ಲಿಸಿದ ನಂತರ, ಬರಬಹುದಾದ ಅರ್ಜಿಗಳನ್ನು ಪರಿಶೀಲಿಸಿ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸೇವೆಗೈದ ಹಿರಿಯ ನಾಗರಿಕರನ್ನು ಮತ್ತು ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದು.

3) ಯಾವುದೇ ಅರ್ಹ ಹಿರಿಯ ನಾಗರಿಕ/ ಸ್ವಯಂ ಸೇವಾ ಸಂಸ್ಥೆ ಅರ್ಜಿ ಸಲ್ಲಿಸದೇ ಇದ್ದಲ್ಲಿ ಸಮಿತಿಯು ಇಚ್ಛಿಸಿದಲ್ಲಿ ಅರ್ಹ ವ್ಯಕ್ತಿ/ ಸಂಸ್ಥೆಯಿಂದ ನೇರವಾಗಿ ಅರ್ಜಿ ಪಡೆದು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಕ್ರಮ ವಹಿಸಬಹುದಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಲಿತಾ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ.
ದೂರವಾಣಿ: 080 - 22032240

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
6. ಅಧ್ಯಕ್ಷರು, ಕರ್ನಾಟಕ ಹಿರಿಯ ನಾಗರಿಕರ ವೇದಿಕೆಗಳ ಒಕ್ಕೂಟ (ರಿ), ನಂ.14, ಪುಷ್ಪರಂಗ ಕಾರ್ನ್‌ವೆಲ್ ಕ್ರಾಸ್‌ರೋಡ್, ಲಾಂಗ್‌ಫೋರ್ಡ್ ಗಾರ್ಡನ್ಸ್, ಬೆಂಗಳೂರು-560 025.
7. ಡಾ॥ ಇಂದಿರಾ ಜಯಪ್ರಕಾಶ್, ನಂ.88/9, ವಾಗ್ದೇವಿ, 19ನೇ ಮುಖ್ಯರಸ್ತೆ, ಪದ್ಮನಾಭನಗರ, ಬೆಂಗಳೂರು-560 070.
8. ಶಾಖಾ ರಕ್ಷಕ ಕಡತ : ಹೆಚ್ಚುವರಿ ಪ್ರತಿಗಳು.